ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

**ಸಂಖ್ಯೆ : ವಾಇ : ಉ ನಿ : ಸುಮಪ : 2019–20** **ದಿನಾಂಕ: 01–06–2019**

# ಪತ್ರಿಕಾ ಆಮಂತ್ರಣ

**ಅತಿಸಾರಭೇದಿ ನಿಯಂತ್ರಣ ಪಾಕ್ಷಿಕ**

**ಉದ್ಘಾಟನೆ :**

**ಜಾವೇದ್ ಆಖ್ತರ್,**
**ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ**

**ಅಧ್ಯಕ್ಷತೆ :**

**ಪಂಕಜ್‌ಕುಮಾರ್ ಪಾಂಡೆ,**
**ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ**

**ಘನ ಉಪಸ್ಥಿತಿ :**

**ಎನ್. ಮಂಜುನಾಥ್ ಪ್ರಸಾದ್,**
**ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

**ದಿನಾಂಕ : 03–06–2019 ಸೋಮವಾರ ಬೆಳಿಗ್ಗೆ 11–00 ಗಂಟೆಗೆ**
**ಸ್ಥಳ : ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ವಾರ್ತಾ ಸೌಧ,**
**ಭಗವಾನ್ ಮಹಾವೀರ ರಸ್ತೆ, ಬೆಂಗಳೂರು**

# ಪತ್ರಿಕಾ ಪ್ರಕಟಣೆ

## ಕಬ್ಬನ್‌ಪಾರ್ಕ್‌ನಲ್ಲಿ ಈ ಭಾನುವಾರ

**ಬೆಂಗಳೂರು, ಜೂನ್ 1 (ಕರ್ನಾಟಕ ವಾರ್ತೆ)**

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. **ದಿನಾಂಕ: 02-06-2019** ರ ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1) ಕಬ್ಬನ್ ಉದ್ಯಾನವನದ ಆವರಣದಲ್ಲಿ ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ **ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.

2) ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

**I ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ**

- ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ **ಯೂನಿವರ್ಸ್ ಆರ್ಟ್ ಫೌಂಡೇಶನ್** ಸಂಸ್ಥೆಯ ಸಹಯೋಗದೊಂದಿಗೆ **ಯಜ್ಞಿಕಾ ಅಯ್ಯಂಗಾರ್ ರವರಿಂದ ಭರತನಾಟ್ಯ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.

## ಜೂನ್ 3 ಮತ್ತು 6 ರಂದು ಯಲಹಂಕ ನಾಡಕಚೇರಿಯಲ್ಲಿ ಕಂದಾಯ ಹಾಗೂ ಪಿಂಚಣಿ ಅದಾಲತ್

ಬೆಂಗಳೂರು, ಜೂನ್ 01: (ಕರ್ನಾಟಕ ವಾರ್ತೆ):

ಯಲಹಂಕ ತಾಲ್ಲೂಕು ವ್ಯಾಪ್ತಿಯಲ್ಲಿನ ಜಾಲ, ಯಲಹಂಕ, ಹೆಸರಘಟ್ಟ ನಾಡ ಕಚೇರಿಗಳಲ್ಲಿ್ಲ ಜೂನ್ 03 ಮತ್ತು 06 ರಂದು ಕಂದಾಯ ಹಾಗೂ ಪಿಂಚಣಿ ಅದಾಲತ್‌ನ್ನು ಹಮ್ಮಿಕೊಳ್ಳಲಾಗಿದೆ.

ಸಾರ್ವಜನಿಕರು, ಗ್ರಾಮಸ್ಥರು ಸಂಬಂಧಪಟ್ಟ ನಾಡಕಛೇರಿಗಳಲ್ಲಿ ತಮ್ಮ ಕುಂದು-ಕೊರತೆಗಳ ಬಗ್ಗೆ ಅಹವಾಲು ಸಲ್ಲಿಸಿ ಮಾಹಿತಿ ಪಡೆದುಕೊಳ್ಳಬಹುದು ಎಂದು ತಹಶೀಲ್ದಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಚಂಡಮಾರುತ ಪೀಡಿತ ಒಡಿಸ್ಸಾದಲ್ಲಿ ವಿದ್ಯುತ್ ಮರುಸ್ಥಾಪಿಸಿದ ಬೆವಿಕಂ

ಬೆಂಗಳೂರು, ಜೂನ್ 1 (ಕರ್ನಾಟಕ ವಾರ್ತೆ)

ಒಡಿಸ್ಸಾ ರಾಜ್ಯದ ಕಟಕ್ ಜಿಲ್ಲೆಯಲ್ಲಿ ಫನಿ ಚಂಡಮಾರುತ ಪೀಡಿತ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜನ್ನು ಮರು ಸ್ಥಾಪಿಸಲು ಬೆಂಗಳೂರು ವಿದ್ಯುತ್ ಸರಬರಾಜು ಕಂಪೆನಿಯಿಂದ ಮೇ 13 ರಂದು 300 ಮಾನವ ಸಂಪನ್ಮೂಲ ತಂಡವನ್ನು (ಇಂಜಿನಿಯರ್‌ಗಳನ್ನು ಒಳಗೊಂಡಂತೆ) ನಿಯೋಜಿಸಲಾಗಿತ್ತು.

ತಂಡವು 66 ವಿತರಣಾ ಪರಿವರ್ತಕಗಳ ಕೇಂದ್ರಗಳು, 29 ಕಿ.ಮಿ 11 ಕೆ.ವಿ. ಲೈನ್ ಮತ್ತು 47 ಕಿ.ಮೀ ಎಲ್.ಟಿ ಲೈನ್ ಅನ್ನು 42-43 ಡಿಗ್ರಿ ತಾಪಮಾನದ ವಾತಾವರಣದಲ್ಲಿ ನಿರ್ಮಿಸಿ, ಕೆಲಸಗಳನ್ನು ಪೂರ್ಣಗೊಳಿಸುವಲ್ಲಿ ಯಶ್ವಸಿಯಾಗಿದೆ. ಇದರಿಂದ ವಿವಿಧ ಗ್ರಾಮಗಳಲ್ಲಿರುವ ಸುಮಾರು 14,000 ಗ್ರಾಹಕರಿಗೆ ವಿದ್ಯುತ್ ಸಂಪರ್ಕವನ್ನು ಮರು ಕಲ್ಪಿಸಲಾಗಿದೆ.

ಕೆಲವೊಂದು ಹಳ್ಳಿಗಳಿಗೆ ರಸ್ತೆಯ ಮೂಲಕ ಪ್ರವೇಶಿಸಲು ಬಹಳ ಕಷ್ಟಕರವಾಗಿದ್ದರೂ ಸಹ, ನಮ್ಮ ಬಿವಿಕಂನ ಕೆಲಸಗಾರರು ಕಂಬಗಳು ಮುಂತಾದ ಸಾಮಾಗ್ರಿಗಳನ್ನು ತಾವೇ ಖುದ್ದಾಗಿ ತೆಗೆದುಕೊಂಡು ಹೋಗಿರುತ್ತಾರೆ. ರಾಜ್ಯದ ಬಿವಿಕಂ ತಂಡದ ಯಶಸ್ವಿ

ಕಾಮಗಾರಿಗಳನ್ನು ಒಡಿಸ್ಸಾದ ಕೇಂದ್ರ ವಿದ್ಯುತ್ ಸರಬರಾಜು ಯುಟಿಲಿಟಿರವರು ಪ್ರಶಂಶಿಸಿರುತ್ತಾರೆ.

ತಂಡವು ತಮಗೆ ವಹಿಸಿದ್ದ ಎಲ್ಲಾ ಕಾಮಗಾರಿಗಳನ್ನು ಯಶ್ವಸಿಯಾಗಿ ಪೂರ್ಣಗೊಳಿಸಿ, ಮೇ 30 ರಂದು ಬೆಂಗಳೂರನ್ನು ತಲುಪಿದ್ದಾರೆ ಎಂದು ಬೆಂಗಳೂರು ವಿದ್ಯುತ್ ಸರಬರಾಜು ಕಂಪೆನಿ ಪ್ರಕಟಣೆಯಲ್ಲಿ ತಿಳಿಸಿದೆ.

## ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿಗಳಿಂದ ವಿವಿಧ ಕಾಮಗಾರಿ ಪರಿಶೀಲನೆ

ಬೆಂಗಳೂರು, ಜೂನ್ 1 (ಕರ್ನಾಟಕ ವಾರ್ತೆ)

ಡಾ. ಜಿ. ಕಲ್ಪನ, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರು ಇಂದು ಬೆಂಗಳೂರಿನ ಅಕ್ಕಿತಿಮ್ಮನಹಳ್ಳಿ ಹಾಕಿ ಕ್ರೀಡಾಂಗಣ ಸಮುಚ್ಛಯಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ಸಂದರ್ಭದಲ್ಲಿ ಹಾಕಿ ಕ್ರೀಡಾಂಗಣ, ಕ್ರೀಡಾ ವಸತಿ ನಿಲಯಗಳಿಗೆ ಭೇಟಿ ನೀಡಿ, ಕ್ರೀಡಾಪಟುಗಳೊಂದಿಗೆ ಸಮಾಲೋಚನೆ ನಡೆಸಿದರು. ನೃಪತುಂಗ ರಸ್ತೆಯ ಯುವನಿಕಾ ಆಡಿಟೋರಿಯಮ್‌ನ ನವೀಕರಣ ಕಾಮಗಾರಿಯ ಪರಿಶೀಲನೆ ನಡೆಸಿದರು. ಸದರಿ ಭೇಟಿಯ ವೇಳೆ ಇಲಾಖೆಯ ಹಿರಿಯ ಅಧಿಕಾರಿಗಳು ಹಾಜರಿದ್ದರು. ತದನಂತರ ರಾಜ್ಯ ಯುವ ಕೇಂದ್ರದಲ್ಲಿ ಅಧಿಕಾರಿಗಳ ಸಭೆ ನಡೆಸಿ, 2019-20 ನೇ ಸಾಲಿನ ಕಾರ್ಯಕ್ರಮಗಳ ಅನುಷ್ಠಾನದ ತಯಾರಿ ಬಗ್ಗೆ ಪರಿಶೀಲನೆ ನಡೆಸಿದರು.
ಛಾಯಾಚಿತ್ರಗಳನ್ನು ಲಗತ್ತಿಸಿದೆ)

## Reserve Bank of India to Observe Financial Literacy Week from June 3

Bengaluru, June 1 (Karnataka Information)

The Financial Literacy Week is an initiative of RBI to promote awareness on key topics every year through a focused campaign. Financial Literacy Week

2019 will be observed from June 3-7 on the theme of "Farmers" and how they benefit by being a part of the formal banking system.

Growth in agriculture is necessary for the overall economic growth and finance is an essential enabler for the same. RBI is actively involved in formulating policies that enhance the flow of credit to the farming community. In recent years, the Bank has undertaken several initiatives to strengthen credit delivery mechanism and financial inclusion.

In order to build awareness and disseminate financial literacy messages to the farming community, focused content in the form of posters and leaflets have been prepared for dissemination. Banks have been advised to display the posters and content in their rural bank branches, Financial Literacy Centers, ATMs and websites. Further, RBI will undertake a centralized mass media campaign during the month of June on Doordarshan and All India Radio to disseminate essential financial awareness messages to farmers.

It is RBI's endeavour to reach out to the farming community and all stakeholders are requested to co-ordinate and make this financial literacy campaign a success.